ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

10

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತು - ಸಭಾಪತಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 5/1/2021

# ಮೇಲ್ಮನೆ ಸಂಘರ್ಷ ತಾರ್ಕಿಕ ಅಂತ್ಯಕ್ಕೆ ಸದನ ಸಮಿತಿ ರಚನೆ

## ವರದಿ ನೀಡಲು ಸಮಿತಿಗೆ 20 ದಿನದ ಗಡುವು

5/1/21

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕಳೆದ ಡಿಸೆಂಬರ್ 15ರಂದು ವಿಧಾನ ಪರಿಷತ್‌ನಲ್ಲಿ ನಡೆದ ಸಂಘರ್ಷವನ್ನು ತಾರ್ಕಿಕ ಅಂತ್ಯಕ್ಕೆ ಒಯ್ಯಲು ನಿರ್ಧರಿಸಿದ ಸಭಾಪತಿ ಕೆ.ಪ್ರತಾಪಚಂದ್ರ ಶೆಟ್ಟಿ, ಇಡೀ ಘಟನಾವಳಿ ಸಂಬಂಧ ವಿಚಾರಣೆ ನಡೆಸಿ ವರದಿ ನೀಡಲು ಜೆಡಿಎಸ್ ಸದಸ್ಯ ಮರಿತಿಬ್ಬೇಗೌಡ ಅಧ್ಯಕ್ಷತೆಯಲ್ಲಿ ಸದನ ಸಮಿತಿ ರಚಿಸಿದ್ದಾರೆ.



ಸಮಿತಿ ಸದಸ್ಯರನ್ನಾಗಿ ಕಾಂಗ್ರೆಸ್ಸಿನ ಬಿ.ಕೆ.ಹರಿಪ್ರಸಾದ್, ಆರ್.ಬಿ. ತಿಮ್ಮಾಪೂರ, ಬಿಜೆಪಿಯ ಅಡಗೂರು ಎಚ್. ವಿಶ್ವನಾಥ್, ಎಸ್.ವಿ.ಸಂಕನೂರು ಅವರನ್ನು ನೇಮಕ ಮಾಡಲಾಗಿದ್ದು, 20 ದಿನದೊಳಗೆ ವರದಿ ನೀಡುವಂತೆ ಸಮಿತಿಗೆ ಸೂಚನೆ ನೀಡಲಾಗಿದೆ. ಡಿ.15ರಂದು ಪರಿಷತ್ ಸಭಾಂಗಣದಲ್ಲಿ ನಡೆದ ಅಹಿತಕರ ಘಟನೆಯಲ್ಲಿನ ನಿಯಮಬಾಹಿರ ವರ್ತನೆಯ ಅಂಶಗಳ ಬಗ್ಗೆ ಪರಿಶೀಲಿಸಬೇಕು. ಘಟನೆಗೆ ಕಾರಣಕರ್ತರಾದ ಪರಿಷತ್ ಸಚಿವಾಲಯದ ಅಧಿಕಾರಿ, ಸಿಬ್ಬಂದಿಗಳು, ಭದ್ರತಾ ಸಿಬ್ಬಂದಿಗಳು, ಸದನದ ಸದಸ್ಯರು ಹಾಗೂ ಇತರರ ಬಗ್ಗೆ ಪರಿಶೀಲಿಸಬೇಕು. ಈ ಘಟನೆಯ ಸಂಬಂಧ ಕಾಂಗ್ರೆಸ್ ಮತ್ತು ಬಿಜೆಪಿ ಶಾಸಕರು ಸಭಾಪತಿಯವರಿಗೆ ಸಲ್ಲಿಸಿರುವ ದೂರು, ಮನವಿ, ಅದರಲ್ಲಿನ ಅಂಶಗಳ ಪರಿಶೀಲನೆ ಬಗ್ಗೆ ಸಮಿತಿಗೆ ತಿಳಿಸಲಾಗಿದೆ.